All India Radio: Bangalore
National Bulletin In Kannada
17.09.2025 07.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

17.09.2025 07.35 a.m.

ಮುಖ್ಯಾಂಶಗಳು

೧. ಇಂದು ಮಧ್ಯಪ್ರದೇಶಕ್ಕೆ ಪ್ರಧಾನಿ ಭೇಟಿ; ವಿವಿಧ ಯೋಜನೆಗಳಿಗೆ ಚಾಲನೆ

೨. ಡೆನ್ಮಾರ್ಕ್ ಪ್ರಧಾನಿಯೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ; ವಿವಿಧ ವಿಷಯಗಳ ಚರ್ಚೆ

೩. ಎಲೆಕ್ಟ್ರಾನಿಕ್ ಉಪಕರಣಗಳಿಗೆ ಅಗತ್ಯವಿರುವ ಚಿಪ್ ಸ್ಥಳೀಯವಾಗಿ ತಯಾರಿಸಲು ಭಾರತ ಸಿದ್ಧ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೪. ಜಪಾಡ್-೨೦೨೫ ಮಿಲಿಟರಿ ಸಮರಾಭ್ಯಾಸದಲ್ಲಿ ಭಾರತ-ರಷ್ಯಾ ಭಾಗಿ

><><><><><><><

ಪ್ರಧಾನಿ ನರೇಂದ್ರ ಮೋದಿ ಇಂದು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು ಧಾರ್‌ನಲ್ಲಿ ಸ್ವಸ್ಥ ನಾರಿ ಸಶಕ್ತ ಪರಿವಾರ್ ಮತ್ತು ಎನೇ ರಾಷ್ಟ್ರೀಯ ಪೋಷಣ್ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಈ ಅಭಿಯಾನವು ಇಂದಿನಿಂದ ಮುಂದಿನ ತಿಂಗಳ ೨ ರವರೆಗೆ ದೇಶಾದ್ಯಂತ ಆಯುಷ್ಮಾನ್ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ಜಿಲ್ಲಾ ಆಸ್ಪತ್ರೆಗಳು ಮತ್ತು ಇತರೆ ಸರ್ಕಾರಿ ಆರೋಗ್ಯ ಸೌಲಭ್ಯಗಳಲ್ಲಿ ನಡೆಯಲಿದೆ. ಇದೇ ವೇಳೆ ಪ್ರಧಾನಿ ಮೋದಿ ಅವರು ವಿವಿಧ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ ಮತ್ತು ಇತರೆ ಉಪಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ಅವರು ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆಯಡಿಯಲ್ಲಿ ದೇಶಾದ್ಯಂತ ಅರ್ಹ ಮಹಿಳೆಯರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಹಣ ವರ್ಗಾಯಿಸಲಿದ್ದಾರೆ. ತಾಯಿ ಮತ್ತು ಮಕ್ಕಳ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸಲು ಪ್ರಧಾನಿ ಮೋದಿ ಅವರು 'ಸುಮನ್ ಸಖಿ ಚಾಟ್‌ಬಾಟ್' ಅನ್ನು ಪ್ರಾರಂಭಿಸಲಿದ್ದಾರೆ. ರಕ್ತಹೀನತೆಯ ವಿರುದ್ಧ ದೇಶದ ಸಾಮೂಹಿಕ ಹೋರಾಟವನ್ನು ಮುಂದುವರೆಸಲು, ರಾಜ್ಯಕ್ಕೆ ಒಂದು ಕೋಟಿ ರೂಪಾಯಿ ಮೌಲ್ಯದ ಕುಡಗೋಲು ಕೋಶ ತಪಾಸಣೆ ಮತ್ತು ಸಮಾಲೋಚನೆ ಕಾರ್ಡ್ ಅನ್ನು ವಿತರಿಸಲಿದ್ದಾರೆ.

><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ಡೆನ್ಮಾರ್ಕ್ ಪ್ರಧಾನಿ ಮೆಟ್ಟೆ ಫ್ರೆಡೆರಿಕ್ಸೆನ್ ಅವರೊಂದಿಗೆ ದೂರವಾಣಿ ಸಂಭಾ?ಣೆ ನಡೆಸಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ ಅವರು, ಹಸಿರು ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಮತ್ತು ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದದ ಆರಂಭಿಕ ತೀರ್ಮಾನಕ್ಕೆ ಎರಡೂ ರಾಷ್ಟ್ರಗಳು ತಮ್ಮ ಬಲವಾದ ಬದ್ಧತೆಯನ್ನು ಪುನರುಚ್ಚರಿಸಿವೆ. ಉಕ್ರೇನ್‌ನಲ್ಲಿನ ಸಂಘ?ವನ್ನು ಶೀಘ್ರವಾಗಿ ಕೊನೆಗೊಳಿಸುವಲ್ಲಿ ಎರಡೂ ದೇಶಗಳು ಪರಸ್ಪರ ಹಿತಾಸಕ್ತಿಗಳನ್ನು ಹಂಚಿಕೊಂಡಿವೆ ಎಂದು ಹೇಳಿದರು.

><><><><><><><

ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಟ್ರಂಪ್ ಅವರು ಪ್ರಧಾನಿ ಮೋದಿ ಅವರಿಗೆ ಹುಟ್ಟುಹಬ್ಬದ ಶುಭಾಶಯ ಕೋರಿದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ಮೋದಿ, ಭಾರತ-ಅಮೆರಿಕ ಸಮಗ್ರ ಮತ್ತು ಜಾಗತಿಕ ಸಹಭಾಗಿತ್ವವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಡೊನಾಲ್ಡ್ ಟ್ರಂಪ್ ಸಂಪೂರ್ಣವಾಗಿ ಬದ್ಧರಾಗಿದ್ದಾರೆ ಎಂದು ಹೇಳಿದರು. ಉಕ್ರೇನ್ ಸಂಘರ್ಷದ

ಶಾಂತಿಯುತ ಪರಿಹಾರಕ್ಕಾಗಿ ಅಮೆರಿಕ ಅಧ್ಯಕ್ಷರ ಉಪಕ್ರಮಗಳನ್ನು ಭಾರತ ಬೆಂಬಲಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

><><><><><><><

ಕೇಂದ್ರ ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಪ್ರಧಾನಿ ನರೇಂದ್ರ ಮೋದಿ ಅವರಿಗೆ ೭೫ನೇ ಹುಟ್ಟುಹಬ್ಬದ ಶುಭಾಶಯ ಕೋರಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಭಾರತಕ್ಕೆ ಹೊಸ ನಿರ್ದೇಶನ, ಹೊಸ ಸ್ಫೂರ್ತಿ ಮತ್ತು ಹೊಸ ಶಕ್ತಿಯನ್ನು ನೀಡಿದ್ದಾರೆ. ಪ್ರಧಾನಿಯವರು ಹಾಕಿಕೊಟ್ಟ ಮಾರ್ಗವನ್ನು ಅನುಸರಿಸಿ, ಭಾರತವು ಅಭಿವೃದ್ಧಿ ಹೊಂದುತ್ತದೆ, ಸಬಲೀಕರಣಗೊಳ್ಳುತ್ತದೆ ಮತ್ತು ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಸಂಕಲ್ಪವನ್ನು ಪೂರೈಸುತ್ತದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಸಚಿವ ಅಶ್ವನಿ ವೈಷ್ಣವ್ ಹೇಳಿದ್ದಾರೆ.

><><><><><><><

ಎಲೆಕ್ಟ್ರಾನಿಕ್ ಉಪಕರಣಗಳಿಗೆ ಅಗತ್ಯವಿರುವ ಚಿಪ್‌ಗಳನ್ನು ಸ್ಥಳೀಯವಾಗಿ ವಿನ್ಯಾಸಗೊಳಿಸಲು ಮತ್ತು ತಯಾರಿಸಲು ಅಗತ್ಯವಾದ ಪರಿಸರ ವ್ಯವಸ್ಥೆಯೊಂದಿಗೆ ಭಾರತ ಸಿದ್ಧವಾಗಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಬ್ರಿಟನ್ ಮೂಲದ ಸೆಮಿಕಂಡಕ್ಟರ್ ತಯಾರಿಕಾ ಮತ್ತು ತರಬೇತಿ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಈಗಾಗಲೇ ೧೦ ಕಂಪನಿಗಳು ಚಿಪ್ ತಯಾರಿಕಾ ಘಟಕಗಳನ್ನು ಆರಂಭಿಸಿವೆ ಎಂದು ಹೇಳಿದರು. ಭಾರತದಲ್ಲಿ ೨೦೨೨ರಲ್ಲಿ ಸೆಮಿಕಂಡಕ್ಟರ್ ಅಭಿಯಾನವನ್ನು ಪ್ರಾರಂಭಿಸಿದಾಗ ದೂರದೃಷ್ಟಿಯ ಗುರಿಯನ್ನು ಇಟ್ಟುಕೊಳ್ಳಲಾಗಿತ್ತು. ಸೆಮಿಕಂಡಕ್ಟರ್ ಮತ್ತು ಚಿಪ್ ಉತ್ಪಾದನೆಗೆ ಅನುಕೂಲಕರವಾದ ವಾತಾವರಣವನ್ನು ಸೃಷ್ಟಿಸುವ ನಿರ್ಧಾರ ಮಾಡಲಾಗಿತ್ತು. ಆ ಕಾರಣಕ್ಕೆ ಸಾಕಷ್ಟು ಕಂಪನಿಗಳು ಭಾರತಕ್ಕೆ ಬಂದಿವೆ. ಈಗಾಗಲೇ ಹಲವು ಕಂಪನಿಗಳು ಪೈಲೆಟ್ ಉತ್ಪಾದನೆ ಪ್ರಾರಂಭಿಸಿದ್ದು, ಸದ್ಯದಲ್ಲೇ ಇನ್ನು ಕೆಲವು ಕಂಪನಿಗಳ ಉತ್ಪಾದನೆ ಪ್ರಾರಂಭಿಸಲಿದೆ ಎಂದರು.  ಭಾರತ ಮತ್ತು ಬ್ರಿಟನ್ ಬಹಳ ಬಲವಾದ ತಂತ್ರಜ್ಞಾನ ಮತ್ತು ಕಾರ್ಯತಂತ್ರದ ಪಾಲುದಾರಿಕೆಯನ್ನು ಹೊಂದಿವೆ ಎಂದು ಹೇಳಿದರು.  ಸೆಮಿಕಂಡಕ್ಟರ್ ಮಿಷನ್ ಆವೃತ್ತಿ ೨.೦ ಉತ್ತಮ ಆರಂಭವಾಗಿದೆ. ನಾವು ಚಿಪ್‌ಗಳನ್ನು ತಯಾರಿಸಲು ಬೇಕಾದ ಉಪಕರಣಗಳು ಮತ್ತು ವಸ್ತುಗಳನ್ನು ನಮ್ಮ ದೇಶದಲ್ಲಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕೆಲಸ ಪ್ರಗತಿಯಲ್ಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.  ಧ್ವನಿ: ಅಶ್ವಿನಿ ವೈಷ್ಣವ್

><><><><><><><

ರಾಷ್ಟ್ರ ಜೊತೆಗಿನ ದೀರ್ಘಕಾಲದ ರಕ್ಷಣಾ ಸಂಬಂಧದ ಭಾಗವಾಗಿ, ಭಾರತವು ರಾಷ್ಟ್ರ ದ ನಿಜ್ನಿ ನವ್ಗೊರೊಡ್‌ನಲ್ಲಿ ನಡೆದ ಜಪಾಡ್-೨೦೨೫ ಮಿಲಿಟರಿ ಸಮರಾಭ್ಯಾಸದಲ್ಲಿ ಭಾಗವಹಿಸಿತ್ತು. ಸೇನೆ, ವಾಯುಪಡೆ ಮತ್ತು ನೌಕಾಪಡೆಯ ೬೫ ಭಾರತೀಯ ಸಶಸ್ತ್ರ ಪಡೆಗಳ ಸಿಬ್ಬಂದಿ ಈ ಸಮರಾಭ್ಯಾಸದಲ್ಲಿ ಭಾಗಿಯಾಗಿದ್ದರು. ಭಾರತೀಯ ಸೇನಾ ಗುಂಪಿನ ನೇತೃತ್ವವನ್ನು ಕುಮಾವೂನ್ ರೆಜಿಮೆಂಟ್‌ನ ಬೆಟಾಲಿಯನ್ ವಹಿಸಿತ್ತು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.  ನಿನ್ನೆ ಮುಕ್ತಾಯಗೊಂಡ ಈ ಸಮರಾಭ್ಯಾಸವು ಎರಡೂ ಪಡೆಗಳು ತಮ್ಮ ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೆಚ್ಚಿಸಲು, ಹೊಸ ತಂತ್ರಜ್ಞಾನಗಳನ್ನು ಸಂಯೋಜಿಸಲು ಮತ್ತು ಬಹುರಾಷ್ಟ್ರೀಯ ನೆಲೆಯಲ್ಲಿ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟಿದೆ. ಭಾರತದ ಭಾಗವಹಿಸುವಿಕೆಯು ರ?ದೊಂದಿಗೆ ರಕ್ಷಣಾ ಸಂಬಂಧಗಳನ್ನು ಬಲಪಡಿಸುತ್ತದೆ ಮತ್ತು ಎರಡೂ ದೇಶಗಳ ನಡುವೆ ಪರಸ್ಪರ ನಂಬಿಕೆ ಮತ್ತು ಸಹಯೋಗವನ್ನು ಉತ್ತೇಜಿಸುತ್ತದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ.

><><><><><><><

ಭಾರತೀಯ ನೌಕಾ ಪಡೆಯ ಜಲಾಂತರ್ಗಾಮಿ ವಿರೋಧಿ ಯುದ್ಧ ಹಡಗು 'ಕದ್ಮತ್', ತನ್ನ ಸಾಗರೋತ್ತರ ನಿಯೋಜನೆಯ ಭಾಗವಾಗಿ ಫಿಜಿಯ ಸುವಾ ತಲುಪಿದೆ. ಈ ಭೇಟಿಯು ಎರಡು ರಾಷ್ಟ್ರಗಳ ನಡುವಿನ ಬಲವಾದ ಸಾಂಸ್ಕೃತಿಕ ಮತ್ತು ಐತಿಹಾಸಿಕ ಬಾಂಧವ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಹಡಗಿನ

ಸಿಬ್ಬಂದಿ ವೃತ್ತಿಪರ ವಿನಿಮಯ, ಸಾಂಸ್ಕೃತಿಕ ಚಟುವಟಿಕೆಗಳು ಮತ್ತು ಸಮುದಾಯ ಸಂಪರ್ಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಳ್ಳುತ್ತಾರೆ. ಫಿಜಿ ಗಣರಾಜ್ಯ ನೌಕಾಪಡೆಯೊಂದಿಗೆ ಜಂಟಿ ಸಮರಾಭ್ಯಾಸವನ್ನು, ಪರಸ್ಪರ ಕಾರ್ಯಸಾಧ್ಯತೆಯನ್ನು ಹೆಚ್ಚಿಸಲು ಮತ್ತು ಕಡಲ ಸಹಕಾರವನ್ನು ಬಲಪಡಿಸಲು ಯೋಜಿಸಲಾಗಿದೆ. ಮೂರು ತಿಂಗಳ ನಿಯೋಜನೆಯು ಫಿಜಿಯೊಂದಿಗೆ ಜನರಿಂದ ಜನರಿಗೆ ಸಂಬಂಧಗಳನ್ನು ಉತ್ತೇಜಿಸುವಾಗ ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸ್ನೇಹ ಮತ್ತು ಭದ್ರತೆಯನ್ನು ಬೆಳೆಸುವ ದೇಶದ ಬದ್ಧತೆಯನ್ನು ಒತ್ತಿ ಹೇಳುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

><><><><><><><

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ದೆಹಲಿಯ ತ್ಯಾಗರಾಜ್ ಕ್ರೀಡಾಂಗಣದಲ್ಲಿ ೧೫ ಪ್ರಮುಖ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ದೃಷ್ಟಿಹೀನ ಕಾಲೇಜು ವಿದ್ಯಾರ್ಥಿನಿಯರಿಗೆ ಅಟಲ್ ದೃಷ್ಟಿ ಹಾಸ್ಟೆಲ್, ಬುದ್ಧಿಮಾಂದ್ಯರಿಗಾಗಿ ಅಟಲ್ ಆಶಾ ಗೃಹ ಮತ್ತು ಹಿರಿಯ ನಾಗರಿಕರಿಗೆ ಸಾವಿತ್ರಿಬಾಯಿ ಫುಲೆ ಗೃಹ ಸೇರಿದಂತೆ ವಿವಿಧ ಉಪಕ್ರಮಗಳಿಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ೭೫ ನೇ ಹುಟ್ಟುಹಬ್ಬದ ಅಂಗವಾಗಿ ಇಂದು ಚಾಲನೆ ನೀಡಲಿದ್ದಾರೆ.

><><><><><><><

ಭಾರತದ ಜಾವೆಲಿನ್ ತಾರೆ ನೀರಜ್ ಚೋಪ್ರಾ ಇಂದು ಜಪಾನ್‌ನ ಟೋಕಿಯೊದಲ್ಲಿ ನಡೆಯಲಿರುವ ೨೦೨೫ರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಅರ್ಹತಾ ಸುತ್ತಿನಲ್ಲಿ ಸ್ಪರ್ಧಿಸಲಿದ್ದಾರೆ. ಚೋಪ್ರಾ, ಜರ್ಮನಿಯ ಡೈಮಂಡ್ ಲೀಗ್ ಚಾಂಪಿಯನ್ ಜೂಲಿಯನ್ ವೆಬರ್, ೨೦೧೨ ರ ಒಲಿಂಪಿಕ್ ಚಿನ್ನದ ಪದಕ ವಿಜೇತ ಕೆಶೋರ್ನ್ ವಾಲ್ಕಾಟ್, ಜೆಕ್ ಗಣರಾಜ್ಯದ ಜಕುಬ್ ವಾಡ್ಲೆಜ್ ಮತ್ತು ಮತ್ತೊಬ್ಬ ಭಾರತೀಯ ಅಥ್ಲೀಟ್ ಸಚಿನ್ ಯಾದವ್ ಅವರೊಂದಿಗೆ ಗ್ರೂಪ್ 'ಎ' ನಲ್ಲಿ ಸ್ಪರ್ಧಿಸಲಿದ್ದಾರೆ. ಸ್ಪರ್ಧೆಯು  ಭಾರತೀಯ ಮಧ್ಯಾಹ್ನ ೩:೪೦ ಕ್ಕೆ ಪ್ರಾರಂಭವಾಗಲಿದೆ. 'ಬಿ' ಗುಂಪಿನಲ್ಲಿ ಪಾಕಿಸ್ತಾನದ ಅರ್ಷದ್ ನದೀಮ್, ಗ್ರೆನಡಾದ ಎರಡು ಬಾರಿಯ ವಿಶ್ವ ಚಾಂಪಿಯನ್ ಆಂಡರ್ಸನ್ ಪೀಟರ್ಸ್, ೨೦೧೫ ರ ವಿಶ್ವ ಚಾಂಪಿಯನ್ ಜೂಲಿಯಸ್ ಯೆಗೊ, ಬ್ರೆಜಿಲ್‌ನ ಲೂಯಿಜ್ ಡಾ ಸಿಲ್ವಾ, ಭಾರತದ ರೋಹಿತ್ ಯಾದವ್ ಮತ್ತು ಯಶ್ವೀರ್ ಸಿಂಗ್, ಶ್ರೀಲಂಕಾದ ಉದಯೋನ್ಮುಖ ಪ್ರತಿಭೆ ರುಮೇಶ್ ತರಂಗ ಪತಿರಾಜ್ ಸೇರಿದ್ದಾರೆ.

><><><><><><><

ಸ್ವಾಮಿ ವಿವೇಕಾನಂದರ ಜೀವನ ದರ್ಶನದ ಸ್ಫೂರ್ತಿದಾಯಕ ಚಲನಚಿತ್ರ "ಚಲೋ ಜೀತೆ ಹೆ", ಇಂದಿನಿಂದ ಅಕ್ಟೋಬರ್ ೨ರವರೆಗೆ ದೇಶದಾದ್ಯಾಂತ ವಿಶೇಷ ಪುನಃ ಪ್ರದರ್ಶನಗೊಳ್ಳಲಿದೆ.

><><><><><><><

ದಕ್ಷಿಣ ಕೊರಿಯಾದಲ್ಲಿ ನಡೆಯಲಿರುವ ಬುಸಾನ್ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದಲ್ಲಿ ಗಮನಾರ್ಹ ಛಾಪು ಮೂಡಿಸಲು ಭಾರತ ಸಜ್ಜಾಗಿದೆ.  ೩೦ನೇ ಬುಸಾನ್ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವವು ಇಂದಿನಿಂದ ಪ್ರಾರಂಭವಾಗಲಿದ್ದು, ಇದೇ ೨೬ ರವರೆಗೆ ಮುಂದುವರಿಯಲಿದೆ.

><><><><><><><

ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ಬ್ಯಾಟಿಂಗ್ ಶ್ರೇಯಾಂಕದಲ್ಲಿ ಭಾರತ ತಂಡದ ಉಪನಾಯಕಿ ಸ್ಮೃತಿ ಮಂದಾನ ಮತ್ತೆ ಅಗ್ರಸ್ಥಾನದಲ್ಲಿದ್ದಾರೆ.  ಭಾನುವಾರ ನಡೆದ ಆಸ್ಟ್ರೇಲಿಯಾ ವಿರುದ್ಧದ ಸರಣಿಯ ಮೊದಲ ಪಂದ್ಯದಲ್ಲಿ ಅರ್ಧಶತಕ ಬಾರಿಸಿದ ನಂತರ ಸ್ಮೃತಿ ಮಂದಾನ, ಇಂಗ್ಲೆಂಡ್ ನಾಯಕಿ ನ್ಯಾಟ್ ಸಿವರ್-ಬ್ರಂಟ್ ಅವರನ್ನು ಹಿಂದಿಕ್ಕಿದರು.

><><><END><><><